# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಿರಸಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-1)ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 220 ಬೆಮುಪ್ರಾ 2006 ದಿನಾಂಕ: 18.08.2006

2. ಶಿರಸಿ ಯೋಜನಾ ಪ್ರಾಧಿಕಾರದ ಪತ್ರ ಸಂ. ನಯೋಪ್ರಾಶಿ/ ಮಯೋಪ್ರಾ: 2007-08 ದಿನಾಂಕ: 18.03.2008.

3. ನಗರ ಯೋಜನಾ ನಿರ್ದೇಶಕರ ಕಛೇರಿಯ ಪತ್ರ ಕಡತ ಸಂಖ್ಯೆ: ನಯೋ (15) ಉಕ/ಶಿರಸಿ.ಮಯೋ (ಪ-1) ಅಂತಿಮ: 2008 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 26-4-2008

****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಶಿರಸಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ (ಪರಿಷ್ಕೃತ-1) ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಶಿರಸಿ ಯೋಜನಾ ಪ್ರಾಧಿಕಾರವು ಶಿರಸಿ ಪಟ್ಟಣದ ಸ್ಥಳೀಯ ಯೋಜನಾ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1)ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆ (ಪರಿಷ್ಕೃತ-1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಪತ್ರ ಕಡತದಲ್ಲಿ ಶಿರಸಿ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 1,20 ಲಕ್ಷಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆ (ಪರಿಷ್ಕೃತ-1)ಯನ್ನು ತಯಾರಿಸಲಾಗಿದೆ. ಶಿರಸಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 2188,32 ಹೆಕ್ಟೇರ್ ಪ್ರದೇಶದಲ್ಲಿ 1549,68 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 1549.68 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 828.60 ಹೆಕ್ಟೇರ್ (ಶೇಕಡ 53.50) ವಾಣಿಜ್ಯಕ್ಕೆ 66.78 ಹೆಕ್ಟೇರ್ (4.31) ಕೈಗಾರಿಕೆಗಾಗಿ 27.90 ಹೆಕ್ಟೇರ್ (ಶೇ.1.80)

ನಗರ ಯೋಜನಾ ಸಹಾಯಕ
ನಿರ್ದೇಶಕರ ಕಚೇರಿ
ಶಿರಸಿ. 531 401.
ಪತ್ರ ಸಂ. 40

ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕೆ 93.04 ಹೆಕ್ಟೇರ್ (ಶೇ.6.[illegible]) ಉದ್ಯಾನವನ ಬಯಲು ಜಾಗಗಳಿಗೆ 86.70 ಹೆಕ್ಟೇರ್ (ಶೇ.5.60) ನಾಗರೀಕ ಸೌಲಭ್ಯಕ್ಕಾಗಿ 47.19 ಹೆಕ್ಟೇರ್ (ಶೇ.3.05) ಹಾಗೂ ಸಾರಿಗೆ:ಸಂಪರ್ಕ ವಲಯಕ್ಕೆ 385.64 ಹೆಕ್ಟೇರ್ (ಶೇ.24.90) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ-I) ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು. ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಉಲ್ಲೇಖ(3)ರ ನಗರ ಯೋಜನಾ ನಿದೇಶಕರ ಕಛೇರಿಯ ಏಕ ಕಡತದಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ:ನಅಇ 80 ಬೆಮಪ್ರಾ2008 ದಿನಾಂಕ:23-5-2008

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶಿರಸಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪರಿಷ್ಕೃತ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 13(3)ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ.

1. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
2. ಅಧ್ಯಕ್ಷರು, ಶಿರಸಿ ಯೋಜನಾ ಪ್ರಾಧಿಕಾರ, ಶಿರಸಿ.
3. ನಗರ ಯೋಜನಾ ಸಹಾಯಕ ನಿರ್ದೇಶಕರು, ಶಿರಸಿ.
4. ಕರ್ನಾಟಕ ರಾಜ್ಯ ಪತ್ರ
5. ಶಾಖಾ ರಕ್ಷಾ ಕಡತ